## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಉದ್ದೇಶಿತ ನೂತನ ಬಾಲಕಿಯರ ಕಟ್ಟಡದ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಇವರ ಪತ್ರ ಸಂಖ್ಯೆ:ಆರ್‌ಡಿಪಿಆರ್‌ಯು 01 ವನಿಹೆ 2019/1930, ದಿನಾಂಕ:08-03-2019.

ಪ್ರಸ್ತಾವನೆ:

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ 2017-18ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳು ರೈತ ಭವನ ಕಟ್ಟಡದಲ್ಲಿ ಪ್ರಾರಂಭವಾಗಿದೆ. ಇಲ್ಲಿ ತರಗತಿಗಳನ್ನು ನಡೆಸಲು ಮತ್ತು ಹೆಚ್ಚುವರಿ ಕೋರ್ಸ್‌ಗಳನ್ನು ಪ್ರಾರಂಭಿಸಲು ಸ್ಥಳಾವಕಾಶ ಇಲ್ಲದಿರುವುದರಿಂದ ನೂತನ ಕ್ಯಾಂಪಸ್‌ನಲ್ಲಿ ಅತ್ಯಂತ ಅವಶ್ಯಕವಾಗಿ ಬೇಕಾದ ಕಟ್ಟಡಗಳ ಕಾಮಗಾರಿ ಪ್ರಾರಂಭಿಸಲಾಗಿದ್ದು, ಇಲ್ಲಿಯವರೆಗೆ ನೂತನ ಆವರಣದಲ್ಲಿ ಒಂದು ಶಾಲಾ ಕಟ್ಟಡ, ಒಂದು ಬಾಲಕರ ವಸತಿ ನಿಲಯ ಮತ್ತು ಭೋಜನಾಲಯ ಹಾಗೂ ಸಬರಮತಿ ಆಶ್ರಮದ ಪ್ರತಿಕೃತಿ ಕಟ್ಟಡಗಳ ಕಾಮಗಾರಿಗಳು ಪ್ರಾರಂಭವಾಗಿರುತ್ತವೆ ಎಂದು ತಿಳಿಸಿ ಈ ನಾಲ್ಕು ಕಾಮಗಾರಿಗಳಿಗೆ ಒಟ್ಟು ಟೆಂಡರ್ ಮೊತ್ತ ರೂ.21,24,18,394.76/- ಆಗಿರುತ್ತದೆ ಹಾಗೂ ಹೊಸದಾಗಿ ತರಬೇತಿ ಕೇಂದ್ರದ ಕಾಮಗಾರಿಗೆ ಅಂದಾಜು ರೂ.13,52,99,264.10/- ವೆಚ್ಚಕ್ಕೆ ಟೆಂಡರ್ ಕರೆಯಲಾಗಿದೆ ಎರಡನ್ನು ಸೇರಿ ಒಟ್ಟಾರೆ ರೂ.34,77,17,658.86/- ಆಗುತ್ತದೆ ಎಂದು ತಿಳಿಸಿರುತ್ತಾರೆ.

ಈ ಹಿಂದಿನ ಸಾಲುಗಳಲ್ಲಿಯೂ ಹಾಗೂ 2018-19ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4515-00-101-0-01-132ಯಲ್ಲಿ ಒದಗಿಸಿರುವ ರೂ.10.00 ಕೋಟಿ ಅನುದಾನ ಸೇರಿ ಇದುವರೆಗೆ ರೂ.25.00ಕೋಟಿ ಅನುದಾನ ಬಿಡುಗಡೆಯಾಗಿದ್ದು, 2019-20ನೇ ಸಾಲಿನ ಆಯವ್ಯಯದಲ್ಲಿ ರೂ.10.00ಕೋಟಿ ಒದಗಿಸಲಾಗಿದೆ. ಪ್ರಸ್ತುತ ಒಟ್ಟು ರೂ.35.00ಕೋಟಿ ಅನುದಾನ ಲಭ್ಯವಿದ್ದು, ವಿದ್ಯಾರ್ಥಿಗಳಿಂದ ಶುಲ್ಕ ರೂಪದಲ್ಲಿ ಪಡೆದಿರುವ ಹಣ ಮತ್ತು ಬ್ಯಾಂಕಿನಲ್ಲಿರುವ ಹಣಕ್ಕೆ ಬಡ್ಡಿ ರೂಪದಲ್ಲಿ ಬಂದಿರುವ ಹಣ ಇತ್ಯಾದಿ ಒಟ್ಟು ಮಾಡಿ ಸುಮಾರು ರೂ.40.00ಕೋಟಿ ಲಭ್ಯವಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, ವಿಶ್ವವಿದ್ಯಾಲಯದ ನೂತನ ಆವರಣದಲ್ಲಿ ಒಂದು ಬಾಲಕಿಯರ ವಸತಿನಿಲಯದ ಕಟ್ಟಡದ ತುರ್ತು ಅವಶ್ಯಕತೆ ಇದೆ. ಹಾಗಾಗಿ ವಿದ್ಯಾರ್ಥಿನಿಯರ ವಸತಿನಿಲಯದ ಕಟ್ಟಡದ ಕಾಮಗಾರಿಗೆ ಅಂದಾಜುಪಟ್ಟಿ ತಯಾರಿಸಿ ಅದಕ್ಕೆ ಪಿ.ಆರ್.ಇ.ಡಿ ಮುಖ್ಯ ಅಭಿಯಂತರರ ತಾಂತ್ರಿಕ ಪರಿಶೀಲನೆ ಪಡೆಯಲಾಗಿದೆ.

ಈ ಹಿನ್ನೆಲೆಯಲ್ಲಿ ಬಾಲಕಿಯರ ವಸತಿ ನಿಲಯ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲು ರೂ.9.95ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 103 ಜಿಪಸ 2019, ಬೆಂಗಳೂರು, ದಿನಾಂಕ:21-06-2019.**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿನ ನೂತನ ಬಾಲಕಿಯರ ವಸತಿ ನಿಲಯದ ಕಟ್ಟಡ ಕಾಮಗಾರಿಯನ್ನು ಅಂದಾಜು ವೆಚ್ಚ ರೂ.9.95 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲು ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇವರಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ.

ಕಾಮಗಾರಿಯನ್ನು ಕೈಗೊಳ್ಳಲು ಸಂಬಂಧಿಸಿದಂತೆ ವಿಧಿಸಿರುವ ಷರತ್ತುಗಳು:

1. ಸದರಿ ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ(ಕೆ.ಟಿ.ಟಿ.ಪಿ) ಅಧಿನಿಯಮ, 1999 ಹಾಗೂ ನಿಯಮಗಳು, 2000 ಮತ್ತು ಇತ್ತೀಚಿನ ನಿಯಮಗಳನ್ನು ಅನುಸರಿಸಿ ಅನುಷ್ಠಾನಗೊಳಿಸುವುದು.
2. ಕಟ್ಟಡ ನಿರ್ಮಾಣ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಿದ ಅನುದಾನವನ್ನು ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.
3. ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಸಮಂಜಸ ದರದಲ್ಲಿ ಉತ್ತಮ ಗುಣಮಟ್ಟದೊಂದಿಗೆ ಕೈಗೊಳ್ಳುವುದು.
4. ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಿಗಧಿತ ಕಾಲಮಿತಿಯಲ್ಲಿ ನಿರ್ವಹಿಸಿ ಪೂರ್ಣಗೊಳಿಸುವುದು.
5. ಕಟ್ಟಡ ಕಾಮಗಾರಿ ಪ್ರಗತಿ ವರದಿಯನ್ನು ಪ್ರತಿ ತ್ರೈಮಾಸಿಕ ಅಂತ್ಯಕ್ಕೆ ಹಾಗೂ ಅನುದಾನದ ವಿನಿಯೋಗಿತ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಯಲ್ಲಿ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

P Devasahayam 21/6/2019

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

21.6.19

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಕುಲಪತಿಗಳು, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
3. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
4. ಹಣಕಾಸು ಅಧಿಕಾರಿ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
7. ಗ್ರಾ.ಅ.ಪಂ.ರಾಜ್ ಇಲಾಖೆಯ ಗಣಕ ಕೋಶಕ್ಕೆ – ಇಲಾಖೆ ಗಣಕ ಜಾಲದಲ್ಲಿ ಅಳವಡಿಸಲು.
8. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾ.ಅ.ಪಂ.ರಾಜ್ ಇಲಾಖೆ – ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.